## ಪ್ರಧಾನ  ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ,
## ಹೊನ್ನಾಳಿ

## ಸಿ.ಸಿ. ನಂ.1136-2024

ಪಿರ್ಯಾದುದಾರರು ಃ        ಹೊನ್ನಾಳಿ ಪೊಲೀಸರು.

- ವಿರುದ್ಧ -

ಆರೋಪಿತರು        ಮಹೇಶ್ ಕೆ ಎಚ್ ಬಿನ್ ಹನುಮಂತಪ್ಪ
55 ವರ್ಷ , ವಾಸಃ ನರಸಗೊಂಡನಹಳ್ಳಿ ಗ್ರಾಮ
ಹೊನ್ನಾಳಿ ತಾಲ್ಲೂಕು.

### ದೋಷಾರೋಪಣೆ ಃ

ಶ್ರೀ. ದೇವದಾಸ್ ಹೆಚ್., ಬಿ.ಎ., ಎಲ್‌ಎಲ್.ಬಿ. ಪ್ರಧಾನ  ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹೊನ್ನಾಳಿ  ಆದ ನಾನು ಮಾಡಿದ ದೋಷಾರೋಪಣೆ ಏನೆಂದರೆಃ

ದಿನಾಂಕಃ 15.05.2024 ರಂದು ರಾತ್ರಿ 7.30 ಗಂಟೆ ಸಮಯದಲ್ಲಿ ಹೊನ್ನಾಳಿ ತಾಲ್ಲೂಕು ನರಸಗೊಂಡನಹಳ್ಳಿ ಗ್ರಾಮದಲ್ಲಿ ಆಸ್ತಿ ಪಾಲು ವಿಭಾಗ ಮಾಡುವ ವಿಚಾರವಾಗಿ ಆರೋಪಿಯಾದ ನೀವು ಸಾಕ್ಷಿ.1 ರಮೇಶ ರವರಿಗೆ ನಿನಗೆ ಯಾತಕ್ಕೆ ಆಸ್ತಿ ನೀನು ಮದುವೆಯಾಗಿಲ್ಲ ಹೋಗಲೇ ಸೂಳೇಮಗನೇ , ಮಿಂಡ್ರಿಮಗನೇ ಎಲ್ಲಿಯಾದರೂ ಹೋಗಿ ಸಾಯಿ ಎಂದು ಅವಾಚ್ಯ ಶಬ್ದಗಳಿಂದ ಬೈದಿರುತ್ತೀರಿ. ಆ ಮೂಲಕ ಆರೋಪಿಯಾದ ನೀವು  ಭಾ.ದಂ.ಸಂ. ಕಲಂ.504 ರಡಿ  ದಂಡಿಸಲ್ಪಡುವ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞೇಯತೆಯಲ್ಲಿ ಮಾಡಿರುತ್ತೀರಿ.

2. ಮೇಲ್ಕಂಡ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ  ಆರೋಪಿಯಾದ ನೀವು ಸಾಕ್ಷಿ.1 ರವರ ಹೊಟ್ಟೆಗೆ ಕಟ್ಟಿಗೆ ಮತ್ತು ಕಲ್ಲಿನಿಂದ ಹೊಡೆದು ಸಾಮಾನ್ಯ  ಸ್ವರೂಪದ

ಗಾಯಪಡಿಸಿರುತ್ತೀರಿ. ಆ ಮೂಲಕ ಆರೋಪಿಯಾದ ನೀವು ಭಾ.ದಂ.ಸಂ. ಕಲಂ.324 ರಡಿಯಲ್ಲಿ ದಂಡಿಸಲ್ಪಡುವ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞೇಯತೆಯಲ್ಲಿ ಮಾಡಿರುತ್ತೀರಿ.

3. ಮೇಲ್ಕಂಡ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಸಾಕ್ಷಿ-1 ಮತ್ತು 2 ರವರಿಗೆ ಕೈ ಮತ್ತು ಕಾಲುಗಳಿಂದ ಹೊಡೆದು ನೋವುಂಟುಪಡಿಸಿರುತ್ತೀರಿ. ಆ ಮೂಲಕ ಆರೋಪಿಯಾದ ನೀವು ಭಾ.ದಂ.ಸಂ. ಕಲಂ.323 ದಂಡಿಸಲ್ಪಡುವ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞೇಯತೆಯಲ್ಲಿ ಮಾಡಿರುತ್ತೀರಿ.

4. ಮೇಲ್ಕಂಡ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಸಾಕ್ಷಿ-2 ರವರಿಗೆ ಚಪ್ಪಲಿ ಕಾಲಿನಿಂದ ಒದ್ದು ಹಿಡಿದು ಎಳೆದಾಡಿ ಅವರ ಮಾನಕ್ಕೆ ಕುಂದುಂಟಾಗುವ ರೀತಿಯಲ್ಲಿ ವರ್ತಿಸಿರುತ್ತೀರಿ. ಆ ಮೂಲಕ ಆರೋಪಿಯಾದ ನೀವು ಭಾ.ದಂ.ಸಂ. ಕಲಂ.354 ರಡಿ ದಂಡಿಸಲ್ಪಡುವ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞೇಯತೆಯಲ್ಲಿ ಮಾಡಿರುತ್ತೀರಿ.

5. ಮೇಲ್ಕಂಡ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಸಾಕ್ಷಿ-2 ರವರಿಗೆ ನೀನು ಜಮೀನನ್ನು ನನಗೆ ಬಿಟ್ಟು ಬೇರೆ ಯಾರಿಗಾದರೂ ಜಮೀನು ಕೊಟ್ಟರೆ ಜೀವ ಸಹಿತ ಬಿಡುವುದಿಲ್ಲ ಎಂದು ಪ್ರಾಣ ಬೆದರಿಕೆ ಹಾಕಿರುತ್ತೀರಿ. ಆ ಮೂಲಕ ಆರೋಪಿಯಾದ ನೀವು ಭಾ.ದಂ.ಸಂ. ಕಲಂ.354 ರಡಿ ದಂಡಿಸಲ್ಪಡುವ ಶಿಕ್ಷಾರ್ಹ ಅಪರಾಧವನ್ನು ನನ್ನ ಸಂಜ್ಞೇಯತೆಯಲ್ಲಿ ಮಾಡಿರುತ್ತೀರಿ.

ಪ್ರಶ್ನೆ 1ಃ- ನಿಮಗೆ ಮೇಲೆ ತಿಳಿಸಿದ ಆರೋಪಣೆಯ ಎಲ್ಲಾ ಸಾರಾಂಶ ತಿಳಿಯಿತೇ?

ಉತ್ತರಃ

ಪ್ರಶ್ನೆ 2ಃ- ನೀವು ಸದರಿ ಆರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಬಯಸುವಿರೋ?

ಉತ್ತರಃ

ಮೇಲ್ಕಂಡ ದೋಷಾರೋಪಣೆಯನ್ನು ಆರೋಪಿತರಿಗೆ ತಿಳಿದ ಕನ್ನಡ ಭಾಷೆಯಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ತೆರೆದ ನ್ಯಾಯಾಲಯದಲ್ಲಿ ಬರೆದುಕೊಳ್ಳಲಾಯಿತು.

ಸ್ಥಳ ಃ ಹೊನ್ನಾಳಿ
ದಿನಾಂಕಃ 02.09.2025.

(ಶ್ರೀ ದೇವದಾಸ್. ಹೆಚ್ )
ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಧೀಶರು,
ಹೊನ್ನಾಳಿ